ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೨೧

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೈದನೆಯ ಅಧಿವೇಶನ

## ಸೋಮವಾರ, ದಿನಾಂಕ: ೨೧ನೇ ಜುಲೈ, ೨೦೧೪

---

**ಸಮೂಹ – I**

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

## ಸಮುದಾಯ ಆರೋಗ್ಯ ಕೇಂದ್ರಗಳು

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೦೧ (೧೬೬) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿರುವ ಸಮುದಾಯ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ಅವುಗಳು ಎಲ್ಲೆಲ್ಲಿ ಇವೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಸಮುದಾಯ ಆರೋಗ್ಯ ಕೇಂದ್ರಗಳು ಅಗತ್ಯ ಮೂಲಭೂತ ಸೌಕರ್ಯ ಹೊಂದಿವೆಯೇ ; ಯಾವ ಸೌಕರ್ಯಗಳನ್ನು ಈ ಕೇಂದ್ರಗಳು ಹೊಂದಿವೆ ;

(ಈ) ಅಗತ್ಯ ಮೂಲಭೂತ ಸೌಕರ್ಯಗಳ ಕೊರತೆ ನೀಗಿಸಲು ಸರ್ಕಾರ ಯಾವ ತುರ್ತು ಕ್ರಮಗಳನ್ನು ಕೈಗೊಳ್ಳಲಾಗುವುದು ?

## ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೦೨ (೧೬೪೭) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರಕಲಗೂಡು ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣಗಳ ಅಭಿವೃದ್ಧಿ ಕಾಮಗಾರಿಯ ಟೆಂಡರ್ ಮೊಬಲಗೆಷ್ಟು ; ಈ ವರೆಗೆ ಖರ್ಚು ಮಾಡಿರುವ ಮೊಬಲಗೆಷ್ಟು ;

(ಆ) ೨೦೧೨–೧೩ನೇ ಸಾಲಿನಲ್ಲಿ ನೀಡಲಾದ ಗುತ್ತಿಗೆಯನ್ನು ನಿರ್ವಹಿಸಲು ವಿಳಂಬವಾಗಿರುವುದಕ್ಕೆ ಕಾರಣಗಳೇನು ;

(ಇ) ಸ್ವಲ್ಪ ಮಳೆಯಲ್ಲೂ ಸಂಪೂರ್ಣ ಬಸ್ ತಂಗುದಾಣ ಜಲಾವೃತಗೊಳ್ಳುತ್ತಿದ್ದು ಪ್ರಯಾಣಿಕರು ಪರದಾಡುವಂತಾಗಿದ್ದು, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಟೆಂಡರ್ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ವೋಲ್ವೋ ಬಸ್ಸುಗಳ ಸಂಚಾರದಿಂದ ಸರ್ಕಾರಕ್ಕೆ ನಷ್ಟ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೩೦೩ (೧೬೪೬) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಸಂಚರಿಸುತ್ತಿರುವ ವೋಲ್ವೋ ಬಸ್ಸುಗಳ ಸಂಖ್ಯೆ ಎಷ್ಟು ; ಯಾವ ಯಾವ ಮಾರ್ಗಗಳಲ್ಲಿ ಎಷ್ಟೆಷ್ಟು ಬಸ್ಸುಗಳು ಸಂಚರಿಸುತ್ತಿವೆ ; (ಪ್ರದೇಶವಾರು ವಿವರ ನೀಡುವುದು)

(ಆ) ಒಂದು ಬಸ್ಸನ್ನು ಎಷ್ಟು ಟ್ರಿಪ್‌ಗಳಲ್ಲಿ ಸಂಚಾರಕ್ಕೆ ಬಿಡಲಾಗಿದೆ ; ಪ್ರತಿ ಟ್ರಿಪ್‌ನಲ್ಲೂ ಪ್ರಯಾಣಿಸುತ್ತಿರುವ ಪ್ರಯಾಣಿಕರ ಸಂಖ್ಯೆ ಎಷ್ಟು ;

(ಇ) ಈ ಬಸ್ಸುಗಳಿಂದ ಬರುತ್ತಿರುವ ವಾರ್ಷಿಕ ಆದಾಯ ಎಷ್ಟು ; (ಕಳೆದ ೩ ವರ್ಷಗಳ ಖರ್ಚು ಹಾಗೂ ಆದಾಯದ ವಿವರ ಒದಗಿಸುವುದು)

(ಈ) ಸಾಕಷ್ಟು ಪ್ರಮಾಣದ ಪ್ರಯಾಣಿಕರು ಇಲ್ಲದೆ ಇದ್ದರೂ ಸಹ ಬಸ್ಸುಗಳು ಸಂಚರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದರಿಂದ ಸಂಸ್ಥೆಗೆ ಉಂಟಾಗುತ್ತಿರುವ ನಷ್ಟವನ್ನು ಭರಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ?

## ಗ್ರಾಮೀಣ ಜನತೆಗೆ ಸಾರಿಗೆ ಸಂಸ್ಥೆ ಬಸ್ಸುಗಳ ಸೌಲಭ್ಯ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೦೪ (೧೬೩೯) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳ ಜನತೆಯು ಸಾರಿಗೆ ಸೌಲಭ್ಯದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಭಾಗದ ಎಷ್ಟು ಗ್ರಾಮಗಳು ಬಸ್ ಸೌಲಭ್ಯದಿಂದ ವಂಚಿತವಾಗಿವೆ ;

(ಇ) ಇದರಿಂದ ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಗ್ರಾಮಗಳ ಜನತೆಗೆ ಉತ್ತಮ ಸಾರಿಗೆ ಸೌಲಭ್ಯ ಕಲ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ಮಹಿಳೆಯರ ಕಲ್ಯಾಣ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು ) –**

೩೦೫ (೧೬೮೫) ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ.ಜಾತಿ/ಪ.ವರ್ಗಗಳಿಗೆ ಸೇರಿದ ಬಾಲಕಿಯರು, ಮಹಿಳೆಯರಿಗಾಗಿ ಜಾರಿಗೊಳಿಸುತ್ತಿರುವ ಕಲ್ಯಾಣ/ಅಭಿವೃದ್ಧಿ ಕಾರ್ಯಕ್ರಮ/ಯೋಜನೆಗಳು ಯಾವುವು ;

(ಆ) ಕೊಳಚೆ ಪ್ರದೇಶಗಳು ಮತ್ತು ಗ್ರಾಮೀಣ ಪ್ರದೇಶಗಳಲ್ಲಿನ ಅತೀ ಕಡು ಬಡತನದ ಬಾಲಕಿಯರು, ಮಹಿಳೆಯರುಗಳಿಗೆ ಈ ಯೋಜನೆಗಳ ಸೌಲಭ್ಯಗಳು ತಲುಪುತ್ತಿವೆಯೇ ಎನ್ನುವುದನ್ನು ಸರ್ಕಾರ ಖಾತರಿಪಡಿಸಿಕೊಳ್ಳುತ್ತಿದೆಯೇ ; (ಖಾತರಿಯ ವ್ಯವಸ್ಥೆಗಳ ವಿವರ ನೀಡುವುದು)

(ಇ) ಸರ್ಕಾರಿ ಸೌಲಭ್ಯಗಳನ್ನು ಪಡೆದ ಕುಟುಂಬಗಳೇ ಸತತವಾಗಿ ಪಡೆಯುತ್ತಿರುವುದನ್ನು ತಪ್ಪಿಸಲು ಮತ್ತು ಸರ್ಕಾರಿ ಕಚೇರಿಗಳಲ್ಲಿ ಸಂಪರ್ಕದಲ್ಲಿರುವ ದಳ್ಳಾಳಿಗಳನ್ನು ನಿರ್ಮೂಲನೆ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಆಡಳಿತಾಧಿಕಾರಿಗಳ ನೇಮಕ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೩೦೬ (೧೯೪೪) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾಸ್ಟರ್ ಆಫ್ ಹಾಸ್ಪಿಟಲ್ ಅಡ್ಮಿನಿಸ್ಟ್ರೇಶನ್ (MHA) ಸ್ನಾತಕೋತ್ತರ ಪದವಿ ಪಡೆದ ಸೇವಾನಿರತ ವೈದ್ಯರುಗಳನ್ನು ಸರ್ಕಾರದ ವೈದ್ಯಕೀಯ ಸಂಸ್ಥೆಗಳಲ್ಲಿ ಆಡಳಿತಾಧಿಕಾರಿಗಳನ್ನಾಗಿ ನೇಮಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಆ) ಈ ಪದವಿ ಪಡೆದ ಸೇವಾನಿರತ ವೈದ್ಯರು ಆಡಳಿತ ನಿರ್ವಹಣೆಯಲ್ಲಿ ಪರಿಣಿತಿ ಪಡೆದಿರುವುದರಿಂದ ಇವರನ್ನು ನೇಮಿಸುವುದು ಸಮಂಜಸವೆಂದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ತೆಗೆದುಕೊಳ್ಳಲಾಗುವ ಕ್ರಮಗಳೇನು ?

## ವೈದ್ಯಕೀಯ ಶಿಕ್ಷಣ ಕಾಲೇಜು ಹಾಗೂ ಶುಶ್ರೂಷಕರುಗಳ ನೇಮಕಾತಿ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೩೦೭ (೧೭೦೬) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆಯಲ್ಲಿ ಸರ್ಕಾರಿ ವೈದ್ಯ ಕಾಲೇಜನ್ನು ಸ್ಥಾಪಿಸಲು ಸರ್ಕಾರ ಘೋಷಣೆ ಮಾಡಿದೆಯೇ ; ಸ್ಥಾಪನೆಯ ದೃಷ್ಟಿಯಿಂದ ತೆಗೆದುಕೊಂಡ ಕ್ರಮವೇನು ;

(ಆ) ಎಲ್ಲಿ ಹಾಗೂ ಎಷ್ಟು ವಿಸ್ತೀರ್ಣದ ಜಮೀನಿನಲ್ಲಿ ಆರಂಭಿಸಲಾಗುವುದು ; ಈ ನಿಟ್ಟಿನಲ್ಲಿ ತೆಗೆದುಕೊಂಡ ಕ್ರಮವೇನು ;

(ಇ) ೨೦೧೨ರ ಫೆಬ್ರವರಿಯಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ಶುಶ್ರೂಷಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಹೊರಡಿಸಿದ ಅಧಿಸೂಚನೆ ಹಾಗೂ ನೇಮಕಾತಿ ಪ್ರಕ್ರಿಯೆ ಯಾವ ಹಂತದಲ್ಲಿದೆ ; ಸಂದರ್ಶನ ನಡೆಸಲಾಗಿದೆಯೇ ;

(ಈ) ಸಂದರ್ಶನ ನಡೆಸಿದ್ದರೆ, ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲಾಗಿದೆಯೇ ; ನೀಡದೆ ಇದ್ದಲ್ಲಿ, ಯಾವಾಗ ನೀಡಲಾಗುವುದು ?

## ಸರ್ಕಾರಿ ಆಸ್ಪತ್ರೆಗಳಲ್ಲಿ ಸೌಲಭ್ಯದ ಕೊರತೆ

**ಶ್ರೀ ಕೆ. ಗೋವಿಂದರಾಜ್** (ವಿಧಾನಸಭೆಯಿಂದ ಚುನಾಯಿತರಾದವರು) –

೩೦೮ (೧೬೫೫) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳು ಎಷ್ಟು ; ಆ ಆಸ್ಪತ್ರೆಗಳಲ್ಲಿ ರೋಗಿಗಳ ದಾಖಲಾತಿ ಸಂಖ್ಯೆಗೆ ಅನುಗುಣವಾಗಿ ಹಾಸಿಗೆ ಸಾಮರ್ಥ್ಯ ಇದೆಯೇ ; (ಆಸ್ಪತ್ರೆವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಬಹುತೇಕ ಸರ್ಕಾರಿ ಆಸ್ಪತ್ರೆಗಳಲ್ಲಿ ಒಳ ರೋಗಿಗಳಿಗಾಗಿ ಹಾಸಿಗೆಗಳ ಕೊರತೆ ಇದ್ದು, ರೋಗಿಗಳು/ಬಾಣಂತಿಯರು ನೆಲದ ಮೇಲೆ ಮಲಗುವಂತಹ ಪರಿಸ್ಥಿತಿಯಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ಈ ನ್ಯೂನತೆಯನ್ನು ನಿವಾರಿಸುವ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳು ಏನು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ರಾಜ್ಯದಲ್ಲಿ ರಕ್ತನಿಧಿ ಕೇಂದ್ರಗಳು ಮತ್ತು ಸಿ.ಟಿ.ಸ್ಕ್ಯಾನ್ ಸೌಲಭ್ಯಗಳನ್ನು ಒಳಗೊಂಡಿರುವ ಸರ್ಕಾರಿ ಜಿಲ್ಲಾಸ್ಪತ್ರೆಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

**"ವಿದ್ಯಾಸಿರಿ ಯೋಜನೆ" ಯಡಿ ಸಹಾಯಧನ**

**ಸಿಗದೇ ಇರುವ ವಿದ್ಯಾರ್ಥಿಗಳ ಕುರಿತು**

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೦೯ (೧೬೫೧) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಾರಿ ಇರುವ "ವಿದ್ಯಾಸಿರಿ ಯೋಜನೆ" ಯಡಿ ಶುಲ್ಕ ವಿನಾಯಿತಿ ಹಾಗೂ ವೇತನ ನೆರವು ಪಡೆಯುವ ವಿದ್ಯಾರ್ಥಿಗಳಿಗೆ ಸಹಾಯಧನ ಸಿಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಸಾಲಿನಲ್ಲಿ ಎಷ್ಟು ವಿದ್ಯಾರ್ಥಿಗಳು ಈ ಯೋಜನೆಯಡಿ ಇದ್ದರು ; (ಮಾಹಿತಿ ನೀಡುವುದು)

(ಇ) ಕಳೆದ ಸಾಲಿನಲ್ಲಿ ಮಂಜೂರಾದ ಅನುದಾನವೆಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಈ) ಎಷ್ಟು ವಿದ್ಯಾರ್ಥಿಗಳಿಗೆ ಈಗಾಗಲೇ ಸಹಾಯಧನ ನೀಡಲಾಗಿದೆ ; ಬಾಕಿ ನೀಡಬೇಕಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಉ) ವಿದ್ಯಾರ್ಥಿಗಳಿಗೆ ಬಾಕಿ ಇರುವ ಸಹಾಯಧನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ?

**ಮೂಲಸೌಲಭ್ಯಗಳ ಕೊರತೆಯುಳ್ಳ ವಸತಿಶಾಲೆ**

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೧೦ (೧೬೭೩) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ಬಾಣಸಗೇರಿ ಗ್ರಾಮದಲ್ಲಿರುವ ಮೊರಾರ್ಜಿ ವಸತಿ ಶಾಲೆಯು ಹಲವು ಕೊರತೆಗಳಿಂದ ಸೊರಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ವಸತಿ ಶಾಲೆಯ ಕೋಣೆಗಳು, ವಸತಿ ನಿಲಯಗಳ ಕಟ್ಟಡಗಳ ಕಿಟಕಿ, ಬಾಗಿಲುಗಳ ದುರಸ್ತಿ, ಸುಣ್ಣ–ಬಣ್ಣ ಬಳಿಯುವುದು, ನೀರಿನ ವ್ಯವಸ್ಥೆ, ಬೋಧಕ–ಬೋಧಕೇತರ ಸಿಬ್ಬಂದಿಗಳ ನೇಮಕ ಮೊದಲಾದ ಸೌಕರ್ಯಗಳನ್ನು ಒದಗಿಸಬೇಕಾಗಿರುವ ತುರ್ತು ಅವಶ್ಯಕತೆ ಇದೆ. ಇದನ್ನು ಸರ್ಕಾರ ಕೂಡಲೇ ಗಮನಿಸಿ ಈ ಅವಶ್ಯ ಸೌಕರ್ಯ ಎಷ್ಟು ದಿವಸಗಳ ಒಳಗೆ ಒದಗಿಸಿಕೊಡುವುದು ? (ವಿವರ ನೀಡುವುದು)

## ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರು ರೋಗಿಗಳಿಗೆ ಔಷಧ ಪೂರೈಸದಿರುವುದು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೩೧೧ (೧೬೭೬) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸರ್ಕಾರದಿಂದ ಪೂರೈಕೆಯಾದ ಔಷಧವನ್ನು ರೋಗಿಗಳಿಗೆ ಕೊಡುವ ಬದಲು ಔಷಧ ಚೀಟಿ ಬರೆದು ಹೊರಗಿನಿಂದ ಔಷಧ ತರಿಸುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಯಾವ ರೋಗಿಗೆ ಯಾವ ಔಷಧ ಸರ್ಕಾರದಿಂದ ಕೊಡಲಾಗಿದೆ ಎಂಬ ವಿವರವನ್ನು ಆಸ್ಪತ್ರೆಯಲ್ಲಿ ನಮೂದಿಸಲಾಗುತ್ತಿದೆಯೇ ಹಾಗೂ ಇದನ್ನು ಮೇಲಿನ ಅಧಿಕಾರಿಗಳು ತಪಾಸಣೆ ಮಾಡುತ್ತಿದ್ದಾರೆಯೇ ;

(ಇ) ಆಸ್ಪತ್ರೆಗಳಲ್ಲಿ ಸರ್ಕಾರ ಪೂರೈಸುತ್ತಿರುವ ಔಷಧ ಗುಣಮಟ್ಟದ್ದು ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಸರ್ಕಾರಿ ಆಸ್ಪತ್ರೆಗಳಿಗೆ ಪೂರೈಸಿದ ಔಷಧವನ್ನು ರ್‍ಯಾಂಡಮ್ ಚೆಕ್ ಮಾಡಲಾಗುವುದೇ ;

(ಉ) ಸರ್ಕಾರಿ ಆಸ್ಪತ್ರೆಯಲ್ಲಿ ಕೊಟ್ಟ ಔಷಧಿಯಿಂದ ಖಾಯಿಲೆ ವಾಸಿಯಾಗದೆ, ಅದೇ ಔಷಧವನ್ನು ರೋಗಿಗಳು ಔಷಧ ಅಂಗಡಿಯಲ್ಲಿ ತೆಗೆದುಕೊಂಡಾಗ ಗುಣವಾಗುತ್ತಿರುವುದು ಏಕೆ ? (ವಿವರ ನೀಡುವುದು)

## ಸಾಫ್ಟ್‌ವೇರ್ ಟೆಕ್ನಾಲಜಿ ಪಾರ್ಕ್ ನಿರ್ಮಾಣ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೧೨ (೧೬೫೭) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ನಗರದಲ್ಲಿ ಸಾಫ್ಟ್‌ವೇರ್ ಟೆಕ್ನಾಲಜಿ ಪಾರ್ಕ್ (ಎಲೆಕ್ಟ್ರಾನಿಕ್ ಸಿಟಿ) ನಿರ್ಮಾಣ ಮಾಡಲು ಕೈಗೊಂಡಿರುವ ಕ್ರಮಗಳೇನು ; ಈ ಬಗ್ಗೆ ಯಾವುದಾದರೂ ಹೊಸ ಯೋಜನೆಯನ್ನು ರೂಪಿಸಲಾಗಿದೆಯೇ ; (ವಿವರಗಳನ್ನು ಒದಗಿಸುವುದು)

(ಆ) ಭಾರತ ಸರ್ಕಾರದ ಸಾಫ್ಟ್‌ವೇರ್ ಟೆಕ್ನಾಲಜಿ ಪಾರ್ಕ್ ಸಂಸ್ಥೆಯ ಮಹಾ ನಿರ್ದೇಶಕರು ಈ ಬಗ್ಗೆ ಅಧಿಕೃತವಾಗಿ ಹೇಳಿಕೆ ನೀಡಿದ್ದು, ರಾಜ್ಯ ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಬೆಂಗಳೂರಿಗೆ ಪರ್ಯಾಯವಾಗಿ ಬೆಂಗಳೂರಿನ ಮೇಲಿನ ಒತ್ತಡ ಕಡಿಮೆ ಮಾಡಲು ಮೈಸೂರಿನಲ್ಲಿ ಸಾಫ್ಟ್‌ವೇರ್ ಇಂಡಸ್ಟ್ರಿಗಳನ್ನು ಸ್ಥಾಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಈ ಬಗ್ಗೆ ಸಾಫ್ಟ್‌ವೇರ್ ಕಂಪನಿಗಳಿಗೆ ನೀಡುತ್ತಿರುವ ಸೌಲಭ್ಯಗಳೇನು ?

## ನಕಲಿ ಪಡಿತರ ಚೀಟಿಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೩೧೩ (೧೭೧೧) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಪಡಿತರ ಚೀಟಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ನಕಲಿ ಪಡಿತರ ಚೀಟಿಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ನಕಲಿ ಪಡಿತರ ಚೀಟಿಗಳಿಂದ ವಾರ್ಷಿಕವಾಗಿ ಆಗುತ್ತಿರುವ ನಷ್ಟು ಎಷ್ಟು ;

(ಈ) ಇದಕ್ಕೆ ಕಾರಣರಾದವರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

## ಹಿಂದುಳಿದ ವರ್ಗದವರಿಗೆ ಕಲ್ಯಾಣ ಕಾರ್ಯಕ್ರಮಗಳು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೧೪ (೧೬೮೮) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಿಂದುಳಿದ ವರ್ಗದವರಿಗಾಗಿ ಜಾರಿಗೊಳಿಸುತ್ತಿರುವ ಕಲ್ಯಾಣ/ಅಭಿವೃದ್ಧಿ ಕಾರ್ಯಕ್ರಮ ಯೋಜನೆಗಳು ಯಾವುವು ;

(ಆ) ಹಿಂದುಳಿದ ವರ್ಗಕ್ಕೆ ಸೇರಿದ ತೀರಾ ಕಡು ಬಡವರಿಗೆ ಈ ಯೋಜನೆಗಳ ಸೌಲಭ್ಯ ತಲುಪುತ್ತಿದೆ ಎನ್ನುವುದನ್ನು ಸರ್ಕಾರ ಖಾತರಿಪಡಿಸಿಕೊಂಡಿದೆಯೇ ;

(ಇ) ಸರ್ಕಾರಿ ಸೌಲಭ್ಯಗಳನ್ನು ಪಡೆದವರು ಅಥವಾ ಅವರ ಕುಟುಂಬಗಳೇ ಪಡೆಯುತ್ತಿರುವುದನ್ನು ತಪ್ಪಿಸಲು ಮತ್ತು ಸರ್ಕಾರಿ ಕಛೇರಿಗಳಲ್ಲಿ ಸಂಪರ್ಕದಲ್ಲಿರುವ ದಲ್ಲಾಳಿಗಳನ್ನು ನಿರ್ಮೂಲನೆ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

## ಸರ್ಕಾರಿ ಸ್ವಾಯತ್ತ ಸಂಸ್ಥೆಗಳಲ್ಲಿ ಸಂಚಿತ ವೇತನದ ಬೋಧಕೇತರರು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೩೧೫ (೧೬೮೬) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವೈದ್ಯಕೀಯ ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿರುವ ಸರ್ಕಾರಿ ಸ್ವಾಯತ್ತ ಸಂಸ್ಥೆಗಳ ಸಂಖ್ಯೆ ಎಷ್ಟು ;

(ಆ) ಆ ಸ್ವಾಯತ್ತ ಸಂಸ್ಥೆಗಳಲ್ಲಿ ಸಮೂಹ 'ಸಿ' ವೃಂದದಲ್ಲಿ ಖಾಲಿ ಇರುವ ವೃಂದಗಳಿಗೆ ಎದುರಾಗಿ ಸಂಚಿತ ವೇತನದಲ್ಲಿ ಗುತ್ತಿಗೆ ಆಧಾರದ ಮೇಲೆ ಬೋಧಕೇತರ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗಿದೆಯೇ ;

(ಇ) ಹಾಗಾದರೆ ಯಾವ ಸ್ವಾಯತ್ತ ಸಂಸ್ಥೆಗಳಲ್ಲಿ ಎಷ್ಟು ಖಾಲಿ ಹುದ್ದೆಗಳಿಗೆ ಎದುರಾಗಿ ಎಷ್ಟು ಮಂದಿ ಸಿಬ್ಬಂದಿಯನ್ನು ಎಂದಿನಿಂದ ನೇಮಕ ಮಾಡಿಕೊಳ್ಳಲಾಗಿದೆ ; (ಪೂರ್ಣ ವಿವರ ನೀಡುವುದು)

(ಈ) ಸದರಿ ಎಲ್ಲಾ ಸ್ವಾಯತ್ತ ಸಂಸ್ಥೆಗಳಲ್ಲಿ ಸದರಿಯವರಿಗೆ ನೀಡುತ್ತಿರುವ ತಲಾ ಮಾಸಿಕ ಸಂಚಿತ ವೇತನದ ಮೊತ್ತವೆಷ್ಟು ;

(ಉ) ಸದರಿ ಸಿಬ್ಬಂದಿಗಳನ್ನು ಕಾಯಂಗೊಳಿಸಲು ಸಚಿವ ಸಂಪುಟದ ಸಭೆಯಲ್ಲಿ ಅನುಮೋದನೆ ಪಡೆಯಲಾಗಿದೆಯೇ ;

(ಊ) ಹಾಗಾದರೆ, ಇದುವರೆವಿಗೂ ಸಕ್ರಮಾತಿ ಆದೇಶ ನೀಡದಿರಲು ಕಾರಣಗಳೇನು ; ಯಾವ ಕಾಲಮಿತಿಯಲ್ಲಿ ಸಕ್ರಮಗೊಳಿಸಲಾಗುವುದು ? (ವಿವರ ನೀಡುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ8, ಕಾ.ಸೂ. 394, ಪ್ರತಿಗಳು 1000